## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.969/2023

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಚಂದ್ರು ಎಂ.ಜೆ | CW: 9 | PW: 6 |
| ತಂದೆಯ ಹೆಸರು | : | ಜಯಪ್ಪ | | |
| ವಯಸ್ಸು | : | 62 | | |
| ವೃತ್ತಿ | : | ನಿವೃತ್ತ ಪಿಎಸ್ ಐ | | |
| ವಾಸಸ್ಥಳ | : | ನ್ಯಾಮತಿ | | |

ದಿನಾಂಕಃ 07.03.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ-

ನಾನು ಆಗಸ್ಟ್ 2017 ರಿಂದ ಮಾರ್ಚ್ 2024 ರವರೆಗೆ ನ್ಯಾಮತಿ ಪೊಲೀಸ್ ಠಾಣೆಯಲ್ಲಿ ಎಎಸ್ ಐ ಹಾಗೂ ಪಿಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 13.07.2023 ರಂದು ರಂದು ನಾನು ಠಾಣಾ ಪ್ರಭಾರ ಕರ್ತವ್ಯದಲ್ಲಿ ಇದ್ದಾಗ, ರಾತ್ರಿ 8.45 ಗಂಟೆ ಸಮಯದಲ್ಲಿ ಈ ಕೇಸಿನ ಕಡತವನ್ನು ಚಾಸಾ 8 ರವರಿಂದ ಪಡೆದುಕೊಂಡು ಚಾಸಾ 1 ರವರು ನೀಡಿದ ಮಹಜರ್ ಮತ್ತು ಮಧ್ಯದ ಮಾಲನ್ನು ಸ್ವೀಕರಿಸಿ, ಠಾಣಾ ಮಾಲುಪಟ್ಟಿಯಲ್ಲಿ ಸೇರಿಸಿರುತ್ತೇನೆ. ಅದೇ ದಿನ ಚಾಸಾ 2 ರಿಂದ 5 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ದಿಃ 31.07.2023 ರಂದು ಮಧ್ಯವನ್ನು ರಾಸಾಯನಿಕ ವಿಶ್ಲೇಷಣೆಗೆ ಚಾಸಾ 6 ರವರ ಮೂಲಕ ಚಾಸಾ 7 ರವರಿಗೆ ಕಳುಹಿಸಿಕೊಟ್ಟು ದಿಃ 31.10.2023 ರಂದು ಎಫ್ ಎಸ್ ಎಲ್ ವರದಿಯನ್ನು ಪಡೆದುಕೊಂಡಿರುತ್ತಾರೆ. ತನಿಖೆ ಪೂರ್ಣಗೊಳಿಸಿ ಆರೋಪಿ ವಿರುದ್ದ ದೋಷಾರೋಪಣಾ ಪಟ್ಟಿಯನ್ನು ತಯಾರಿಸಿರುತ್ತೇನೆ.

ಸಾಕ್ಷಿಯು ನಿಪಿ 2 ಸ್ಥಳ ಪಂಚನಾಮೆಯಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ 2(ಇ) ಎಂದು ಗುರುತಿಸಲಾಯಿತು. ಎಫ್ ಎಸ್ ಎಲ್ ವರದಿಯನ್ನು ನಿಪಿ 6 ಎಂದು, ಸಾಕ್ಷಿಯ ಸಹಿಯನ್ನು ನಿಪಿ 6(ಎ) ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ- ಆರೋಪಿ ಪರ ಶ್ರೀ.ಎನ್ ಎಸ್ ವಕೀಲರಿಂದಃ-</u>

ದಿಃ 13.07.2023 ರಂದು ರಂದು ನಾನು ಠಾಣಾ ಪ್ರಭಾರ ಕರ್ತವ್ಯದಲ್ಲಿ ಇದ್ದಾಗ, ರಾತ್ರಿ 8.45 ಗಂಟೆ ಸಮಯದಲ್ಲಿ ಈ ಕೇಸಿನ ಕಡತವನ್ನು ಚಾಸಾ 8 ರವರಿಂದ ಪಡೆದುಕೊಂಡು ಚಾಸಾ 1 ರವರು ನೀಡಿದ ಮಹಜರ್ ಮತ್ತು ಮಧ್ಯದ ಮಾಲನ್ನು ಸ್ವೀಕರಿಸಿ, ಠಾಣಾ ಮಾಲುಪಟ್ಟಿಯಲ್ಲಿ ಸೇರಿಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ. ಅದೇ ದಿನ ಚಾಸಾ 2 ರಿಂದ 5 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ. ದಿಃ 31.07.2023 ರಂದು ಮಧ್ಯವನ್ನು ರಾಸಾಯನಿಕ ವಿಶ್ಲೇಷಣೆಗೆ ಚಾಸಾ 6 ರವರ ಮೂಲಕ ಚಾಸಾ 7 ರವರಿಗೆ ಕಳುಹಿಸಿಕೊಟ್ಟು ದಿಃ 31.10.2023 ರಂದು ಎಫ್ ಎಸ್ ಎಲ್ ವರದಿಯನ್ನು ಪಡೆದುಕೊಂಡಿರುತ್ತಾರೆ ಎಂದು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ. ತನಿಖೆ ಪೂರ್ಣಗೊಳಿಸಿ ಆರೋಪಿ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ತಯಾರಿಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.